All India Radio: Bangalore
Regional Bulletin In Kannada
07.12.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ನಾಳೆಯಿಂದ ಬೆಳಗಾವಿಯಲ್ಲಿ ವಿಧಾನಮಂಡಲ ಅಧಿವೇಶನ ೨೧ಕ್ಕೂ ಹೆಚ್ಚು ವಿಧೇಯಕಗಳ ಮಂಡನೆಗೆ ಸರ್ಕಾರ ತಯಾರಿ
- ಚಿನ್ನಸ್ವಾಮಿ ಕ್ರೀಡಾಂಗಣದಿಂದ ಐಪಿಎಲ್ ಪಂದ್ಯಗಳನ್ನು ಸ್ಥಳಾಂತರಗೊಳಿಸಲು ಬಿಡುವುದಿಲ್ಲ-ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ಪ್ರಗತಿಯಲ್ಲಿ
- ಇಂಡಿಗೋ ವಿಮಾನ ರದ್ದು ಹಿನ್ನೆಲೆ : ಬೆಂಗಳೂರಿನಿಂದ ಅಂತಾರಾಜ್ಯಕ್ಕೆ ನೈಋತ್ಯ ರೈಲ್ವೆಯಿಂದ ರೈಲುಗಳ ವ್ಯವಸ್ಥೆ
- ಮೆಕ್ಕೆಜೋಳ ಖರೀದಿ ಕೇಂದ್ರವನ್ನು ಪ್ರತಿ ತಾಲೂಕಿನಲ್ಲಿ ಆರಂಭಿಸುವಂತೆ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹ

<><><><>

ನಾಳೆಯಿಂದ ಬೆಳಗಾವಿಯಲ್ಲಿ ವಿಧಾನಮಂಡಲ ಅಧಿವೇಶನ ನಡೆಯಲಿದೆ. ಒಟ್ಟು ೧೦ ದಿನಗಳ ಅಧಿವೇಶನದಲ್ಲಿ ೨೧ಕ್ಕೂ ಹೆಚ್ಚು ವಿಧೇಯಕಗಳ ಮಂಡನೆಗೆ ಸರ್ಕಾರ ತಯಾರಿ ನಡೆಸಿದೆ. ದ್ವೇಷ ಭಾಷಣ ತಡೆಗೆ ಹೊಸ ಕಾನೂನು, ಸಾಮಾಜಿಕ ಬಹಿಷ್ಕಾರ ಹೇರುವುದನ್ನು ಶಿಕ್ಷಾರ್ಹ ಅಪರಾಧವಾಗಿ ಪರಿಗಣಿಸುವ ಎರಡು ಪ್ರಮುಖ ವಿಧೇಯಕಗಳು ಅಧಿವೇಶನದಲ್ಲಿ ಚರ್ಚೆಗೆ ಬರಲಿವೆ. ನೀರಾವರಿ ಯೋಜನೆಗಳು, ಕಬ್ಬು ಬೆಳೆಗಾರರ ಸಮಸ್ಯೆ ಸೇರಿದಂತೆ ಆಡಳಿತ ಪಕ್ಷದ ವೈಫಲ್ಯಗಳ ಅನಾವರಣಕ್ಕೆ ಪ್ರತಿಪಕ್ಷಗಳು ಸಿದ್ಧವಾಗಿವೆ. ಜೊತೆಗೆ ನಾಯಕತ್ವ ಗೊಂದಲ, ಪಕ್ಷದೊಳಗಿನ ಭಿನ್ನಮತ, ಶಾಸಕರ ದೆಹಲಿ ಯಾತ್ರೆ ಸೇರಿದಂತೆ ಹಲವು ವಿಷಯಗಳನ್ನು ಪ್ರಸ್ತಾಪಿಸಿ ಸರ್ಕಾರವನ್ನು ಮುಜುಗರಕ್ಕೆ ಸಿಲುಕಿಸಲು ಪ್ರತಿಪಕ್ಷಗಳು ಸಜ್ಜಾಗಿವೆ. ಪ್ರತಿಪಕ್ಷಗಳನ್ನು ಎದುರಿಸಲು ಆಡಳಿತಾರೂಢ ಕಾಂಗ್ರೆಸ್ ಕೂಡ ಕಾರ್ಯತಂತ್ರ ರೂಪಿಸಿದೆ. ಒಟ್ಟಾಗಿ

ಪ್ರತಿಪಕ್ಷಗಳನ್ನು ಎದುರಿಸುವ ಹಿನ್ನೆಲೆಯಲ್ಲಿ ಮಂಗಳವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ.

<><><><>

ಚಿನ್ನಸ್ವಾಮಿ ಕ್ರೀಡಾಂಗಣದಿಂದ ಐಪಿಎಲ್ ಪಂದ್ಯಗಳನ್ನು ಸ್ಥಳಾಂತರಗೊಳ್ಳಲು ಬಿಡುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ನಡೆದ ಕೆಎಸ್‌ಸಿಎ ಚುನಾವಣೆಯಲ್ಲಿ ಮತದಾನ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಐಪಿಎಲ್ ಪಂದ್ಯಗಳನ್ನು ಇಲ್ಲೇ ನಡೆಸುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ನಾನು ಕ್ರಿಕೆಟ್ ಅಭಿಮಾನಿಯಾಗಿದ್ದು, ಮುಂದಿನ ದಿನಗಳಲ್ಲಿ ಎಚ್ಚರಿಕೆ ವಹಿಸಿ ಕ್ರೀಡಾಂಗಣದ ಗೌರವ ಉಳಿಯುವಂತೆ ಮಾಡುವುದಾಗಿ ಸ್ಪಷ್ಟಪಡಿಸಿದ್ದಾರೆ. ಪರ್ಯಾಯವಾಗಿ ದೊಡ್ಡ ಕ್ರೀಡಾಂಗಣವನ್ನು ನಿರ್ಮಾಣ ಮಾಡುವುದಾಗಿ ತಿಳಿಸಿದ್ದಾರೆ.

ಧ್ವನಿ : ಡಿ.ಕೆ. ಶಿವಕುಮಾರ್ (೧೮ ಸೆಕೆಂಡ್‌ಗಳು)

<><><><>

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ೮೮ನೇ ವಾರ್ಷಿಕ ಸರ್ವಸದಸ್ಯರ ಸಭೆ ಮತ್ತು ಚುನಾವಣೆ ಪ್ರಕ್ರಿಯೆ ಆರಂಭಗೊಂಡಿದೆ. ರಾತ್ರಿ ೭ರವರೆಗೆ ಚುನಾವಣೆ ಪ್ರಕ್ರಿಯೆ ನಡೆಯಲಿದೆ. ನಂತರ ಫಲಿತಾಂಶ ಪ್ರಕಟವಾಗಲಿದೆ. ಅಧ್ಯಕ್ಷ ಸ್ಥಾನಕ್ಕಾಗಿ ಬ್ರಿಜೇಶ್ ಬಣದಿಂದ ದಿ ಪ್ರಿಂಟರ್ಸ್ ಮೈಸೂರು ಪ್ರೈವೇಟ್ ಲಿಮಿಟೆಡ್‌ನ ನಿರ್ದೇಶಕ ಕೆ.ಎನ್. ಶಾಂತಕುಮಾರ್ ಮತ್ತು ಟೀಮ್ ಗೇಮ್ ಚೇಂಜಸ್ ಬಣದಿಂದ ಮಾಜಿ ಕ್ರಿಕೆಟಿಗ ಬಿ.ಕೆ. ವೆಂಕಟೇಶ್ ಪ್ರಸಾದ್ ಸ್ಪರ್ಧಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತದಾನದಲ್ಲಿ ಭಾಗವಹಿಸಿದ್ದರು.

<><><><>

ಸಂವಿಧಾನ ಪ್ರಜಾಪ್ರಭುತ್ವ ಎಂದು ಜಪಿಸುವ ಕಾಂಗ್ರೆಸ್ ನಾಯಕರು ಭಗವದ್ಗೀತೆಯ ಜೊತೆಗೆ ರಾಮಾಯಣ, ಮಹಾಭಾರತವನ್ನು ಓದುವಂತೆ ಕೇಂದ್ರ ಉಕ್ಕು ಮತ್ತು ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಭಗವದ್ಗೀತೆ ಜಗದ ಬೆಳಕು, ಅರಿವು ಸನ್ಮಾರ್ಗದ ದೀವಿಗೆ ಎಂದು ಹೇಳಿದ್ದಾರೆ. ಮಕ್ಕಳು ಬಾಲ್ಯದಿಂದಲೇ ಒಳ್ಳೆ ಮಾರ್ಗದಲ್ಲಿ ನಡೆಯುವ ಸದುದ್ದೇಶದಿಂದ ಕೇಂದ್ರ ಶಿಕ್ಷಣ ಸಚಿವ

ಧರ್ಮೇಂದ್ರ ಪ್ರಧಾನ್ ಅವರಿಗೆ ಪತ್ರ ಬರೆದು ಪಠ್ಯದಲ್ಲಿ ಭಗವದ್ಗೀತೆ ಸೇರಿಸಬೇಕು ಎಂದು ಒತ್ತಾಯಿಸಿದ್ದೇನೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><><>

ಇಂಡಿಗೋ ವಿಮಾನ ರದ್ದು ಹಿನ್ನೆಲೆಯಲ್ಲಿ ಪ್ರಯಾಣಿಕರು ಅಂತಾರಾಜ್ಯ ಪ್ರಯಾಣದಲ್ಲಿ ಅನಾನುಕೂಲ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ನೈಋತ್ಯ ರೈಲ್ವೆ ಹೆಚ್ಚುವರಿ ಎಸಿ ಬೋಗಿಗಳ ಸೇವೆ ಆರಂಭಿಸಿದ್ದು, ಇಂದಿನಿಂದ ಮೂರು ದಿನಗಳವರೆಗೆ ದೆಹಲಿ ಪುಣೆ ಮತ್ತು ಚೆನ್ನೈಗೆ ವಿಶೇಷ ೮ ರೈಲುಗಳ ವ್ಯವಸ್ಥೆ ಮಾಡಿದೆ. ಕೆಎಸ್‌ಆರ್ ಬೆಂಗಳೂರಿನಿಂದ-ಪುಣೆ, ಕೆಎಸ್‌ಆರ್ ಬೆಂಗಳೂರಿನಿಂದ-ಚೆನ್ನೈ, ಯಶವಂತಪುರದಿಂದ-ದೆಹಲಿಗೆ ವಿಶೇಷ ರೈಲುಗಳು ಸಂಚರಿಸಲಿವೆ.

<><><>

ಮೆಕ್ಕೆಜೋಳ ಖರೀದಿ ಕೇಂದ್ರವನ್ನು ಪ್ರತಿ ತಾಲ್ಲೂಕಿನಲ್ಲಿ ಆರಂಭಿಸುವಂತೆ ಹಾಗೂ ಹೆಚ್ಚುವರಿ ಬೆಂಬಲ ಬೆಲೆ ನೀಡಿ ರೈತರಿಂದ ಖರೀದಿಸಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಶಿರಸಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೆಕ್ಕೆಜೋಳವನ್ನು ಬೆಂಬಲ ಬೆಲೆ ಯೋಜನೆಯಡಿ ಸರ್ಕಾರ ಖರೀದಿಸುವುದಾಗಿ ಘೋಷಿಸಿದೆ. ಆದರೂ ಬೆಂಬಲ ಬೆಲೆ ಮೊತ್ತ ಕಡಿಮೆಯಾಗಿದ್ದು, ಹೆಚ್ಚುವರಿ ದರಕ್ಕಾಗಿ ರೈತರು ಹೋರಾಟ ನಡೆಸಿದ್ದಾರೆ ಎಂದು ಹೇಳಿದ್ದಾರೆ. ಕಳೆದ ವರ್ಷ ರಾಜ್ಯದಲ್ಲಿ ೧೫ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ೫೪ ಲಕ್ಷ ಟನ್ ಮೆಕ್ಕೆಜೋಳ ಬೆಳೆಯಲಾಗಿತ್ತು. ಈ ವರ್ಷ ೧೭ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ೫೪ ಲಕ್ಷ ಮೆಟ್ರಿಕ್ ಟನ್ ಬೆಳೆಯಲಾಗಿದೆ. ೨ ಲಕ್ಷ ಮೆಟ್ರಿಕ್ ಟನ್ ನಷ್ಟ ಆಗಿದೆ. ಇಂತಹ ಸಂದರ್ಭದಲ್ಲಿ ರೈತರ ನೆರವಿಗೆ ರಾಜ್ಯ ಸರ್ಕಾರ ಧಾವಿಸಬೇಕು ಎಂದು ತಿಳಿಸಿದ್ದಾರೆ.

<><><>

ವಿಜಯಪುರ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಅರಣ್ಯ ಇಲಾಖೆ ಪ್ರವಾಸೋದ್ಯಮ ಇಲಾಖೆ ಹಾಗೂ ವೃಕ್ಷ ಅಭಿಯಾನ ಪ್ರತಿಷ್ಠಾನದ ಸಹಯೋಗದಲ್ಲಿ ವೃಕ್ಷಥಾನ್ ಪಾರಂಪರಿಕ ರನ್ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮವನ್ನು ಬೃಹತ್ ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಖಾತೆ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಉದ್ಘಾಟಿಸಿದರು. ೨೧ ಕಿಲೋಮೀಟರ್, ೧೦ ಕಿಲೋಮೀಟರ್, ೫ ಕಿಲೋಮೀಟರ್ ಸೇರಿದಂತೆ ವಿವಿಧ ಓಟಗಳಲ್ಲಿ ೨೦ ಸಾವಿರಕ್ಕೂ ಅಧಿಕ ಮಂದಿ ಉತ್ಸಾಹದಿಂದ ಪಾಲ್ಗೊಂಡಿದ್ದರು. ಮೂರು

ವಿಭಾಗಗಳಲ್ಲಿ ವಿಜೇತರಾದವರಿಗೆ ಸಚಿವ ಎಂ.ಬಿ. ಪಾಟೀಲ್ ಬಹುಮಾನ ಹಾಗೂ ಪ್ರಮಾಣವಚನ ವಿತರಿಸಿದರು.

<><><><>

ಮಡಿಕೇರಿಯಲ್ಲಿಂದು ಸಶಸ್ತ್ರಪಡೆಗಳ ಧ್ವಜ ದಿನಾಚರಣೆಯನ್ನು ಆಯೋಜಿಸಲಾಗಿತ್ತು. ಮಡಿಕೇರಿಯ ಜನರಲ್ ತಿಮ್ಮಯ್ಯ ಸ್ಮಾರಕ ಭವನದಲ್ಲಿರುವ ಅಮರ್ ಜವಾನ್ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದ ಮಾಜಿ ಯೋಧರು, ಅಧಿಕಾರಿಗಳು ಭಾರತೀಯ ಯೋಧರ ತ್ಯಾಗ ಬಲಿದಾನ ಸ್ಮರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ಮೇಜರ್ ಜನರಲ್ ಕೆ.ಸಿ. ಕಾರ್ಯಪ್ಪ, ೧೯೪೯ರಿಂದ ಪ್ರತೀ ವರ್ಷವೂ ಡಿಸೆಂಬರ್ ೭ರಂದು ಸಶಸ್ತ್ರ ಪಡೆಗಳ ಧ್ವಜ ದಿನಚರಣೆಯನ್ನು ಆಯೋಜಿಸುತ್ತಾ ಬರಲಾಗುತ್ತಿದೆ. ಈ ದಿನದಂದು ಭಾರತೀಯ ಸೇನೆ, ವಾಯು ಮತ್ತು ನೌಕಾಪಡೆಗಳ ಯೋಧರನ್ನು ಸ್ಮರಿಸುವ ಮೂಲಕ ಅವರ ಕರ್ತವ್ಯಕ್ಕೆ ಗೌರವ ನೀಡಲಾಗುತ್ತದೆ ಎಂದು ಹೇಳಿದರು.

ಕೊಡಗಿನಿಂದ ಇತ್ತೀಚಿನ ವರ್ಷಗಳಲ್ಲಿ ಭಾರತೀಯ ಸೇನೆ ಸೇರಲು ಯುವಪೀಳಿಗೆ ಹೆಚ್ಚಿನ ಆಸಕ್ತಿ ವಹಿಸುತ್ತಿಲ್ಲ ಎಂದು ಅವರು ವಿಷಾದ ವ್ಯಕ್ತಪಡಿಸಿದರು. ಯುವಪೀಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸೇನೆಗೆ ಸೇರಿ ದೇಶಸೇವೆಗೆ ಮುಂದಾಗುವಂತೆಯೂ ಕರೆ ನೀಡಿದರು. ಕಾರ್ಯಕ್ರಮದಲ್ಲಿ ಕೊಡಗು ಜಿಲ್ಲಾ ಪೊಲೀಸ್ ತುಕಡಿಯಿಂದ ಮೂರು ಸುತ್ತು ಕುಶಲ ತೋಪುಗಳನ್ನು ಹಾರಿಸಿ ಯೋಧರಿಗೆ ಗೌರವ ಸಲ್ಲಿಸಲಾಯಿತು.

<><><><>

ಗಂಭೀರ ಬಿಕ್ಕಟ್ಟಿನಲ್ಲಿ ಸಿಲುಕಿರುವ ಕರ್ನಾಟಕದ ಸಾರ್ವಜನಿಕ ವಿಶ್ವವಿದ್ಯಾಲಯಗಳ ಪುನಶ್ಚೇತನಕ್ಕೆ ಸರ್ಕಾರ ತುರ್ತು ಗಮನ ಹರಿಸಬೇಕೆಂದು ವಿಧಾನ ಪರಿಷತ್ ಸದಸ್ಯ ಶಿವಕುಮಾರ್.ಕೆ. ಆಗ್ರಹಿಸಿದ್ದಾರೆ. ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ವತಿಯಿಂದ ಏರ್ಪಡಿಸಲಾಗಿದ್ದ ೬೯ನೇ ಮಹಾಪರಿನಿರ್ವಾಣ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಖಾಯಂ ಬೋಧಕ ಬೋಧಕೇತರ ಸಿಬ್ಬಂದಿಯ ಭಾರೀ ಕೊರತೆಯಿಂದಾಗಿ ಸಾರ್ವಜನಿಕ ವಿಶ್ವ ವಿದ್ಯಾಲಯಗಳ ಭವಿಷ್ಯ ಮಸುಕಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

<><><><>

ರಾಜ್ಯದ ವಿವಿಧೆಡೆ ಇಂದು ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ ೨೦೨೫ ನಡೆಯುತ್ತಿದೆ. ಬೆಂಗಳೂರು ಗ್ರಾಮಾಂತರ  ಜಿಲ್ಲೆಯ ೬ ಕೇಂದ್ರಗಳಲ್ಲಿ ಪರೀಕ್ಷೆ ಸುಗಮವಾಗಿ ನಡೆಯುತ್ತಿದೆ. ಈ ಪರೀಕ್ಷೆಯು ಎರಡು ಪತ್ರಿಕೆಗಳನ್ನು ಹೊಂದಿದ್ದು, ಮೊದಲ ಪತ್ರಿಕೆಯು ಬೆಳಿಗ್ಗೆ ೯.೩೦ ರಿಂದ ೧೨ ಗಂಟೆಯವರೆಗೆ ನಡೆಯಿತು. ಎರಡನೇ ಪತ್ರಿಕೆಯು ಮಧ್ಯಾಹ್ನ ೨ ರಿಂದ ಸಂಜೆ ೪.೩೦ ವರೆಗೆ  ೪ ಕೇಂದ್ರಗಳಲ್ಲಿ ನಡೆಯುತ್ತಿದೆ.

<><><><>

ಇದೇ ೧೨ ರಿಂದ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಕಡ್ಡಾಯಗೊಳಿಸಲಾಗಿದೆ. ದ್ವಿಚಕ್ರ ವಾಹನ ಸವಾರರು ವಾಹನ ಚಲಾಯಿಸುವ ವೇಳೆ ಕಡ್ಡಾಯವಾಗಿ ಹೆಲ್ಮೆಟ್ ಧರಿಸುವ ಮೂಲಕ ದಂಡಾಸ್ತ್ರದಿಂದ ಪಾರಾಗಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>